ಆ)

ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2006–07ನೇ ಸಾಲಿನ ನೇಮಕಾತಿಯಲ್ಲಿ ಮತ್ತು ಬಡ್ತಿ ಮುಖಾಂತರ ಭರ್ತಿ ಮಾಡಲಾಗುತ್ತಿದೆ ಖಾಲಿ ಇರುವ 22 ವೃತ್ತಿ ಶಿಕ್ಷಕರ ಹುದ್ದೆಗಳನ್ನು ತುಂಬಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ	ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳಲ್ಲಿ 475 ಉಪನ್ಯಾಸಕರ ಹುದ್ದೆಯನ್ನು ತುಂಬಲು ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ 18 08 2006 ರಂದು ಪ್ರಕಟಣೆ ನೀಡಿದೆ ಇನ್ನೂ 776 ಹುದ್ದೆಗಳಿಗೆ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆ 595 ಅರ್ಹ ಪ್ರೌಢಶಾಲಾ ಶಿಕ್ಷಕರಿಗೆ ದಿನಾಂಕ 23 10 2006 ರಲ್ಲಿ ಉಪನ್ಯಾಸಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ತುಂಬಲಾಗಿದೆ

ಇ) ಶಿಕ್ಷಕರ ವರ್ಗಾವಣೆ ನಿಯಂತ್ರಣ ಅಧ್ಯಾದೇಶ 2006ರ ಅನ್ವಯ ಹೊಸದಾಗಿ ನೇಮಕವಾಗುವ, ಬಡ್ತಿ ಹೊಂದುವ ನೌಕರರನ್ನು ಮೊದಲಿಗೆ ಗ್ರಾಮೀಣ ಪ್ರದೇಶದ ಶಾಲಾ ಕಾಲೇಜುಗಳಿಗೆ ನೇಮಕ ಮಾಡಲು ಆಸ್ಪದ ಕಲ್ಪಿಸಲಾಗಿದೆ

1033 (1096) ಶ್ರೀ ರವಿ ಸಿ.ಟಿ (ಚಿಕ್ಕಮಗಳೂರು). ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಪದವಿ ಕಾಲೇಜುಗಳಲ್ಲಿರುವ ಅರೆಕಾಲಿಕ ಉಪನ್ಯಾಸಕರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು),

ಆ) ಎಷ್ಟು ವರ್ಷಗಳಿಂದ ಈ ನೌಕರರು ಸೇವೆ ಸಲ್ಲಿಸುತ್ತಿದ್ದಾರೆ, ಅವರಿಗೆ ನೀಡುತ್ತಿರುವ ವೇತನವೆಷ್ಟು (ವಿವರ ನೀಡುವುದು),

ಇ) ಸರ್ಕಾರದ ಹೊಸ ಉಪನ್ಯಾಸಕರ ನೇಮಕಾತಿ ಯೋಜನೆಯಿಂದ ಈ ಅರೆಕಾಲಿಕ ಉಪನ್ಯಾಸಕರಿಗೆ ಆಗುತ್ತಿರುವ ಅನ್ಯಾಯ ಸರ್ಕಾರದ ಗಮನಕ್ಕೆ ಬಂದಿದೆಯೇ,

ಈ) ಬಂದಿದ್ದಲ್ಲಿ, ಈ ಅರೆಕಾಲಿಕ ಉಪನ್ಯಾಸಕರಿಗೆ ನ್ಯಾಯ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) 2006–07ನೇ ಶೈಕ್ಷಣಿಕ ಸಾಲಿನಲ್ಲಿ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಒಟ್ಟು 1916 ಅತಿಥಿ ಉಪನ್ಯಾಸಕರುಗಳು ಕಾರ್ಯನಿರ್ವಹಿಸುತ್ತಿದ್ದಾರೆ ಜಿಲ್ಲಾವಾರು ವಿವರವನ್ನು ಅನುಬಂಧ–1ರಲ್ಲಿ ನೀಡಲಾಗಿದೆ

ಆ) 12 09 2005ರ ಸರ್ಕಾರಿ ಆದೇಶ ಸಂಖ್ಯೆ ಇಡಿ 63 ಡಿಸಿಇ 2005ರಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಆಯಾ ವಿಷಯಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರ ಕಂಡುಬರುತ್ತದೆಯೋ ಆಯಾ ವಿಷಯಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರುಗಳನ್ನು ಅಗತ್ಯತೆಗನುಗುಣವಾಗಿ ಆಯ್ಕೆ ಮಾಡಿಕೊಳ್ಳಲಾಗುವುದು ಸದರಿ ಅತಿಥಿ ಉಪನ್ಯಾಸಕರುಗಳು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಪೂರ್ಣಕಾಲಿಕ ಉಪನ್ಯಾಸಕರಿಗೆ ಹಂಚಿಕೆಯಾಗಿ ಉಳಿಯುವ ಕಾರ್ಯಭಾರದಲ್ಲಿ ವಾರಕ್ಕೆ ಕನಿಷ್ಠ 4 ಗಂಟೆ ಹಾಗೂ ಗರಿಷ್ಠ 8 ಗಂಟೆಗಳು ಮಾತ್ರ ಕಾರ್ಯಭಾರ ನಿರ್ವಹಿಸುತ್ತಾರೆ ಅತಿಥಿ ಉಪನ್ಯಾಸಕರ ಆಯ್ಕೆಯು ಕೇವಲ ತಾತ್ಕಾಲಿಕ ವ್ಯವಸ್ಥೆಯಾಗಿದ್ದು, ಆಯಾ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮಾತ್ರ ನೇಮಕ ಮಾಡಿಕೊಳ್ಳಲಾಗುತ್ತದೆ ದಿನಾಂಕ 23 11 2006, ಇಡಿ 105 ಡಿಸಿಇ 2006ರ ಸರ್ಕಾರಿ ಆದೇಶದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಎಲ್ಲೆಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರ ಕಂಡುಬರುತ್ತದೆಯೋ ಅಲ್ಲಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ನೇಮಕಗೊಳ್ಳುವ ಅತಿಥಿ ಉಪನ್ಯಾಸಕರುಗಳಿಗೆ 2006–07 ರಿಂದ ಗರಿಷ್ಠ ಮೊತ್ತವನ್ನು ರೂ 2000/– ದಿಂದ ಮಾಹೆಯಾನ ರೂ 5000–00ಕ್ಕೆ ಹೆಚ್ಚಿಸಲು ಆದೇಶಿಸಲಾಗಿದೆ

ಇ) ದಿನಾಂಕ 11/15 06 93 ಸಂಖ್ಯೆ ಇಡಿ 264 ಡಿಸಿಇ 92ರ ಸರ್ಕಾರಿ ಅಧಿಸೂಚನೆಯಲ್ಲಿ ಇಲಾಖೆಯ ಉಪನ್ಯಾಸಕರ ನೇಮಕಾತಿ ನಿಯಮಗಳನ್ನು ಪರಿಷ್ಕರಿಸಿದ್ದು, ಸದರಿ ಅಧಿಸೂಚನೆಯಲ್ಲಿ ಇಲಾಖೆಯಲ್ಲಿ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವವರು ಕೆ ಪಿ ಎಸ್ ಸಿ ಗೆ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರೆಕಾಲಿಕ ಉಪನ್ಯಾಸಕರುಗಳಿಗೆ ಹಾಲಿ ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆ ಹಾಗೂ weightage at the rate of one percent for each completed acadmic year of service shall be added to the average percentage of marks secured by the candidate in the Master's degree in the relevant subject, if such candidate possesses teaching experience as lecturer in any college affiliated to any University established by law in India including the candidate who has served as Part time lecturer in the Government First Grade College of the Department of Collegiate Education ಸೌಲಭ್ಯವನ್ನು ನೀಡಲಾಗುತ್ತಿದೆ

ಈ) ಪ್ರಶ್ನೆ ಉದ್ಭವಿಸುವುದಿಲ್ಲ

1035 (1036) ಶ್ರೀ ಶಂಕರಲಿಂಗೇಗೌಡ ಹೆಚ್ ಎಸ್ (ಚಾಮರಾಜ): ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಮೈಸೂರು ನಗರದಲ್ಲಿನ ಘೋಷಿತ ಹಾಗೂ ಅಘೋಷಿತ ಕೊಳಚೆ ಪ್ರದೇಶಗಳ ವಿವರ ನೀಡುವುದು,

ಆ) ಈ ಕೊಳಚೆ ಪ್ರದೇಶಗಳಲ್ಲಿರುವ ಮನೆ, ಗುಡಿಸಲು ಹಾಗೂ ಜನಸಂಖ್ಯೆ ವಿವರ ನೀಡುವುದು,

ಇ) ಜವಹರಲಾಲ್ ನೆಹರು ರಾಷ್ಟ್ರೀಯ ನಗರ ಪುನರುಜ್ಜೀವನ ಯೋಜನೆಯಡಿ ಯಾವ ಯಾವ ಕೊಳಚೆ ಪ್ರದೇಶಗಳ ನಿರ್ಮೂಲನಾ ಕಾರ್ಯ ಕೈಗೊಳ್ಳಲಾಗುತ್ತಿದೆ,

ಈ) ಯಾವ ಯಾವ ಕೊಳಚೆ ಪ್ರದೇಶಗಳಲ್ಲಿ ಮನೆ, ಮೂಲಭೂತ ಸೌಕರ್ಯ ಇತ್ಯಾದಿಗಳನ್ನು ಒದಗಿಸಲಾಗುತ್ತಿದೆ,